**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಜಗದೇವ್ ಗುತ್ತೇದಾರ, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರಿಸುವ ಕುರಿತು**

*****

ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿಯಲ್ಲಿ ಒಟ್ಟು 638 ಅನುಮೋದನೆಗೊಂಡ (ಸ್ಯಾಂಕ್ಷನ್ಸ್) ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಇದ್ದರೂ ಕೂಡ ಕೇವಲ 200 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಅಲ್ಲಿ ಇನ್ನೂ 438 ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಖಾಲಿ ಇವೆ. ಅಂದರೆ ಭರ್ತಿ ಮಾಡಿರುವ ಹುದ್ದೆಗಳಿಗಿಂತ ಖಾಲಿ ಇರುವ ಹುದ್ದೆಗಳ ಸಂಖ್ಯೆಯೇ ಜಾಸ್ತಿಯಾಗಿದೆ. ಹೀಗಾದರೆ ಅಲ್ಲಿನ ವಿದ್ಯಾರ್ಥಿಗಳ ಗತಿ ಏನು? ಆದ್ದರಿಂದ ಕೂಡಲೇ ಅಲ್ಲಿನ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ.

ಗುಲಬರ್ಗಾ ವಿಶ್ವವಿದ್ಯಾಲಯದಿಂದ ಈಗಾಗಲೇ ರಾಯಚೂರು ಮತ್ತು ಬೀದರ್ ವಿಶ್ವವಿದ್ಯಾಲಯಗಳು ಬೇರ್ಪಡೆಗೊಂಡಿರುವುದರಿಂದ ಸದರಿ ವಿಶ್ವವಿದ್ಯಾಲಯದ ಅಡಿಯಲ್ಲಿ ಕಾಲೇಜುಗಳ ಸಂಖ್ಯೆ: 162 ಇದ್ದು ಹಣದ ಕೊರತೆ ಕೂಡ ಇರುವುದರಿಂದ ವಿಶ್ವವಿದ್ಯಾಲಯದಿಂದ ನಿವೃತ್ತಿಗೊಂಡಿದ 605 ಸಿಬ್ಬಂದಿಗಳಿಗೆ ಪಿಂಚಣಿ ಪಾವತಿಸಲು ವಿಶ್ವವಿದ್ಯಾಲಯದಲ್ಲಿ ಹಣ ಇರುವುದಿಲ್ಲ. ಆದ್ದರಿಂದ ಸರ್ಕಾರ ಪಿಂಚಣಿ ವಂತಿಕೆಗೆ ಹಣ ಬಿಡುಗಡೆ ಮಾಡಬೇಕಾಗಿ ಹಾಗೂ ಸದರಿ ಪಿಂಚಣಿ ವೇತನವನ್ನು ಹೆಚ್.ಆರ್.ಎಂ.ಎಸ್ ಮುಖಾಂತರ ಬಿಡುಗಡೆ ಮಾಡಲು ಸರ್ಕಾರ ಕ್ರಮ ಜರುಗಿಸಬೇಕೆಂದು ಕೋರುತ್ತೇನೆ.

ಇನ್ನೊಂದು ಪ್ರಮುಖ ಅಂಶವೆಂದರೆ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ನಿವೃತ್ತಿಹೊಂದಿದ ಸಿಬ್ಬಂದಿಗಳ ಹುದ್ದೆಗೆ ಎದುರಾಗಿ ಜನಬಲ ಅಡಿಯಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದೆ ತದನಂತರ ರಾಯಚೂರು ಮತ್ತು ಬೀದರ ವಿಶ್ವವಿದ್ಯಾಲಯಗಳು ಬೇರ್ಪಟ್ಟ ನಂತರ ಸಿಬ್ಬಂದಿಗಳು ಹೆಚ್ಚುವರಿಯಾಗಿರುತ್ತಾರೆ. ಆದುದರಿಂದ ಹೆಚ್ಚುವರಿಯಾದ 71 ಜನಬಲ ಸಿಬ್ಬಂದಿಗಳನ್ನು ಆಯಾ ವಿಶ್ವವಿದ್ಯಾಲಯಕ್ಕೆ ಹಂಚಿಕೆ ಮಾಡಲು ರಾಯಚೂರು ಹಾಗೂ ಬೀದರ ವಿಶ್ವವಿದ್ಯಾಲಯಗಳು ಈ ಹೆಚ್ಚುವರಿ ಸಿಬ್ಬಂದಿಗಳನ್ನು ಸ್ವೀಕರಿಸಲು ಆದೇಶ ನೀಡಬೇಕೆಂದು ಕೋರುವ ವಿಷಯವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

**ಸರ್ಕಾರದ ಉತ್ತರ:**

ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯನ್ನು ಇಲಾಖೆಯ ಹಂತದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಿಲಾಗಿರುತ್ತದೆ. ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಲೆಕ್ಕ ಶೀರ್ಷಿಕೆ: 2202-03-102-0-04-118-ಸಹಾಯಾನುದಾನ-ವಿಶ್ರಾಂತಿ ವೇತನಗಳು ಅಡಿಯಲ್ಲಿ 2023-24ನೇ ಸಾಲಿಗೆ ರೂ.15880.05ಲಕ್ಷಗಳು ಹಾಗೂ 2024-25ನೇ ಸಾಲಿಗೆ ರೂ.1650.00ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಮುಂದುವರೆದು, ಪಿಂಚಣಿ ಹಾಗೂ ಪಿಂಚಣಿ ಸೌಲಭ್ಯಗಳ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲದಿಂದ ಭರಿಸುವಂತೆಯೂ, ಈ ಉದ್ದೇಶಕ್ಕೆ ಯಾವುದೇ ಹೆಚ್ಚುವರಿ ಅನುದಾನವನ್ನು ಒದಗಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆಯು ಈಗಾಗಲೇ ತಿಳಿಸಿರುತ್ತದೆ.

ಗುಲ್ಬರ್ಗಾ ವಿಶ್ವವಿದ್ಯಾಲಯವನ್ನು ಒಳಗೊಂಡಂತೆ ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ರಾಜ್ಯದ ವಿಶ್ವವಿದ್ಯಾಲಯಗಳ ನಿವೃತ್ತ ಸಿಬ್ಬಂದಿಗಳ ಪಿಂಚಣಿ ವೇತನವನ್ನು ಹೆಚ್.ಆರ್.ಎಂ.ಎಸ್

ಮುಖಾಂತರ ಬಿಡುಗಡೆಗೊಳಿಸುವ ಕೋರಿಕೆ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.

ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ರಾಯಚೂರು ವಿಶ್ವವಿದ್ಯಾಲಯವನ್ನು ವಿಭಜಿಸಿದ ಸಂದರ್ಭದಲ್ಲಿ ಸರ್ಕಾರವು ಗುಲ್ಬರ್ಗಾ ವಿಶ್ವವಿದ್ಯಾಲಯದ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಮಾತ್ರ ವರ್ಗಾವಣೆ ಮಾಡಲಾಗಿದ್ದು, ಈ ವಿಶ್ವವಿದ್ಯಾಲಯಗಳು ನೇಮಿಸಿಕೊಂಡಿರುವ ತಾತ್ಕಾಲಿಕ ಹುದ್ದೆಗಳನ್ನು ವರ್ಗಾವಣೆ ಮಾಡಿರುವುದಿಲ್ಲ.

ಮುಂದುವರೆದು, ರಾಯಚೂರು ವಿಶ್ವವಿದ್ಯಾಲಯ ಮತ್ತು ಗುಲ್ಬರ್ಗಾ ವಿಶ್ವವಿದ್ಯಾಲಯಗಳು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 55 ಮತ್ತು 56ರಲ್ಲಿ ಪ್ರದತ್ತ ಅಧಿಕಾರದನ್ವಯ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಮಂಜೂರಾದ ಹುದ್ದೆಗಳಿಗೆ ಎದುರಾಗಿ ಅರೆಕಾಲಿಕ/ ತಾತ್ಕಾಲಿಕವಾಗಿ ಅರ್ಹ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಮುಂದುವರೆದು, ಆರ್ಥಿಕ ಇಲಾಖೆಯು ತನ್ನ ಹಿಂಬರಹ ಸಂಖ್ಯೆ: ಆಇ 348 ವೆಚ್ಚ-8/2023, ದಿನಾಂಕ: 12.06.2023ರಲ್ಲಿ ನೀಡಿರುವ ನಿರ್ದೇಶನದನುಸಾರ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 15 ಯುಎನ್ಇ 2023, ದಿನಾಂಕ: 08.08.2023ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರ/ಆರ್ಥಿಕ ಇಲಾಖೆಯ ಪೂರ್ವಾನುಮೋದನೆ ಇಲ್ಲದೇ ನಿಯಮಬಾಹಿರವಾಗಿ ಮಂಜೂರಾದ ಹುದ್ದೆಗಳಿಗೂ ಮೀರಿ ಅಗತ್ಯಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ನೇಮಿಸಿಕೊಂಡ ನೌಕರರನ್ನು ಸೇವೆಯಿಂದ ಬಿಡುಗಡೆಗೊಳಿಸಿ ವಿಶ್ವವಿದ್ಯಾಲಯಗಳ ಸಿಬ್ಬಂದಿಗಳ ಸಂಖ್ಯೆಯನ್ನು ತರ್ಕಬದ್ಧಗೊಳಿಸಲು (Rationalize) ಕ್ರಮವಹಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚಿಸಲಾಗಿದೆ ಮತ್ತು ಈ ಸೂಚನೆಗಳ ಉಲ್ಲಂಘನೆ/ಲೋಪಗಳಿಗೆ ಹಾಗೂ ಅದರ ಪರಿಣಾಮಗಳಿಗೆ ವಿಶ್ವವಿದ್ಯಾಲಯದ ಕುಲಪತಿ, ಕುಲಸಚಿವರು ಮತ್ತು ಹಣಕಾಸು ಅಧಿಕಾರಿ ಹಾಗೂ ಸಂಬಂಧಿಸಿದ ಅಧಿಕಾರಿ/ನೌಕರರನ್ನು ನೇರ ಹೊಣೆಗಾರರಾಗಿರುತ್ತಾರೆ ಎಂದು ಸುತ್ತೋಲೆಯನ್ನು ಹೊರಡಿಸಲಾಗಿದೆ.

*************

ಇಡಿ 123 ಯುಎನ್ಇ 2025

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು